# ಕರ್ನಾಟಕ ವಿಧಾನಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 75 (93) |
| ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | 27.01.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಡಿಕೆ, ಕೋಕೋ ಮತ್ತು ಮೆಣಸು ಬೆಳೆಗಳ ಹವಾಮಾನ ಆಧಾರಿತ ಬೆಳೆ ವಿಮೆ ಸಮೀಕ್ಷೆಯನ್ನು ಈಗಾಗಲೇ ಪೂರ್ಣ ಪ್ರಮಾಣದಲ್ಲಿ ಕೈಗೊಳ್ಳಲಾಗಿದೆಯೇ: | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಡಿಕೆ, ಕೋಕೋ ಮತ್ತು ಮೆಣಸು ಬೆಳೆಗಳ 2025ನೇ ಸಾಲಿನ ಮುಂಗಾರು ಸಮೀಕ್ಷೆಯನ್ನು ಪೂರ್ಣಗೊಳಿಸಲಾಗಿದೆ. ಹವಾಮಾನ ಆಧಾರಿತ ಬೆಳೆ ವಿಮೆ ಸಮೀಕ್ಷೆಯನ್ನು ಮಾಡಲಾಗುವುದಿಲ್ಲ. |
| ಆ) | ಜಿಲ್ಲೆಯ ಹಲವಾರು ಅಡಿಕೆ, ಕೋಕೋ ಮತ್ತು ಮೆಣಸು ಬೆಳೆಯುವ ಬೆಳೆಗಾರರು ಇನ್ನೂ ಸಮೀಕ್ಷೆಯಿಂದ ಹೊರಗುಳಿದಿದ್ದಾರೆ ಎಂಬ ಅಭಿಪ್ರಾಯ ಬೆಳೆಗಾರರಿಂದಲೇ ಕೇಳಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ರೈತರು ಬೆಳೆ ಸಮೀಕ್ಷೆಯಿಂದ ಹೊರಗುಳಿಯುವ ಸಾಧ್ಯತೆ ಇರುವುದಿಲ್ಲ. 2025-26ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆಯ ಕಾಲಾವಧಿಯನ್ನು ನವೆಂಬರ್‌ವರೆಗೆ ವಿಸ್ತರಿಸಿ ಮುಕ್ತಾಯಗೊಳಿಸಲಾಗಿತ್ತು.<br><br>ಅರ್ಹ ಅಡಿಕೆ ಮತ್ತು ಮೆಣಸು ಬೆಳೆಗಾರರು ಬೆಳೆ ಸಮೀಕ್ಷೆಯಿಂದ ಹೊರಗುಳಿಯದಂತೆ ಕೆಳಕಾಣಿಸಿದ ಕ್ರಮಕೈಗೊಳ್ಳಲಾಗಿದೆ. |
| ಇ) | ಬಂದಿದ್ದಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬೆಳೆ ವಿಮೆ ಸಮೀಕ್ಷೆಯ ಕಾಲಾವಧಿಯನ್ನು ಮತ್ತಷ್ಟು ಕಾಲ ವಿಸ್ತರಿಸಿ ಆ ಮೂಲಕ ಜಿಲ್ಲೆಯಲ್ಲಿನ ಯಾವುದೇ ಅರ್ಹ ಅಡಿಕೆ, ಕೋಕೋ ಮತ್ತು ಮೆಣಸು ಬೆಳೆಗಾರರು ಹವಾಮಾನ ಆಧಾರಿತ ಬೆಳೆ ವಿಮೆ ಸಮೀಕ್ಷೆಯಿಂದ ಯಾವುದೇ ಕಾರಣಕ್ಕೂ ಹೊರಗುಳಿಯದಂತೆ ಸರ್ಕಾರ ಕೂಡಲೇ ಅಗತ್ಯ ಹಾಗೂ ಸೂಕ್ತ ಕ್ರಮ ವಹಿಸುವುದೇ? | 1. ರೈತರು ತಾವು ಬೆಳೆದ ಬೆಳೆಯ ಪ್ರಾಮಾಣಿಕತೆ /ನಿಖರತೆ ಬಗ್ಗೆ ದೃಢಪಡಿಸಿಕೊಳ್ಳುವ ಉದ್ದೇಶದಿಂದ ರೈತರಿಗೆ 'ರೈತರ ಆಪ್' ಮೂಲಕ ಬೆಳೆ ಸಮೀಕ್ಷೆ ಮಾಡಿ ತಮ್ಮ ಜಮೀನಿನ ವಿವರಗಳನ್ನು ತಾವೇ ದಾಖಲಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.<br>2. ಒಂದು ವೇಳೆ ಕಾರಣಾಂತರಗಳಿಂದ ಎಂದರೆ ನೆಟ್ ವರ್ಕ್ ಸಮಸ್ಯೆ, ಆಂಡ್ರಾಯಿಡ್ ಫೋನ್ ಬಳಕೆ ಬಗ್ಗೆ ಮಾಹಿತಿ ಇಲ್ಲದಿರುವುದು ಹಾಗೂ ಇತ್ಯಾದಿಗಳಿಂದ ತಮ್ಮ ಜಮೀನಿನ ವಿವರಗಳನ್ನು ದಾಖಲಿಸಲು ಸಾಧ್ಯವಾಗದಿದ್ದಲ್ಲಿ ಸರ್ಕಾರವು ಖಾಸಗಿ ನಿವಾಸಿಗಳ (Private Residents) ಮುಖೇನ ಬೆಳೆ ಸಮೀಕ್ಷೆ ನಡೆಸಿ ರೈತರ ತಾಕುಗಳ ವಿವರಗಳನ್ನು ದಾಖಲಿಸಲು ಅವಕಾಶ ಕಲ್ಪಿಸಿರುತ್ತದೆ.<br>3. ಬೆಳೆ ಸಮೀಕ್ಷೆಯಲ್ಲಿ ದಾಖಲಾದ ವಿವರಗಳನ್ನು ವೀಕ್ಷಿಸಲು ಬೆಳೆ ದರ್ಶಕ್ ಆಪ್ ನಲ್ಲಿ ಅವಕಾಶ ಕಲ್ಪಿಸಲಾಗಿದೆ.<br>4. ಜೊತೆಗೆ ರೈತರು ರೈತ ಸಂಪರ್ಕ ಕೇಂದ್ರಗಳಲ್ಲಿ ಖುದ್ದಾಗಿ ಬೇಟಿ ನೀಡಿ ವೀಕ್ಷಿಸಬಹುದಾಗಿರುತ್ತದೆ. |

**ಸಂಖ್ಯೆ: HORTI 31 HGM 2026**

**(ಎಸ್. ಎಸ್. ಮಲ್ಲಿಕಾರ್ಜುನ್)**

**ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು**